ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರು ಮತ್ತು ಸಂಗೀತ ಶಿಕ್ಷಕರುಗಳಿಗೆ ಒಂದು ಹೆಚ್ಚುವರಿ ವೇತನ ಬಡ್ತಿ ಮಂಜೂರು ಮಾಡುವ ಕುರಿತು.

ಓದಲಾಗಿದೆ : 1 ಸರ್ಕಾರದ ಆದೇಶ ಸಂಖ್ಯೆ:ಇಡಿ 78 ಎಸ್‌ಎಲ್‌ಬಿ 2016 ದಿ:03-03-2017 ಮತ್ತು ತಿದ್ದುಪಡಿ ಆದೇಶ ದಿನಾಂಕ:10-03-2017.

2 ಕರ್ನಾಟಕ ರಾಜ್ಯ ಚಿತ್ರಕಲಾ ಶಿಕ್ಷಕರ ಸಂಘ(ರಿ), ಬೆಂಗಳೂರು ಇವರ ಪತ್ರ ದಿನಾಂಕ:04-03-2017.

** ** **

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ[1] ಸರ್ಕಾರದ ಆದೇಶಗಳಲ್ಲಿ ಸರ್ಕಾರಿ/ಅನುದಾನಿತ ಪ್ರೌಢಶಾಲಾ ಮುಖ್ಯ ಶಿಕ್ಷಕರು ಮತ್ತು ಸಹ ಶಿಕ್ಷಕರುಗಳಿಗೆ ಜೂನ್ 2016ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲಾಗಿದೆ. ಕ್ರಮಾಂಕ[2]ರ ಕೋರಿಕೆಯಲ್ಲಿ ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರು ಮತ್ತು ಸಂಗೀತ ಶಿಕ್ಷಕರುಗಳಿಗೆ ಈ ಸೌಲಭ್ಯವನ್ನು ವಿಸ್ತರಿಸುವ ಕುರಿತು ಅಧ್ಯಕ್ಷರು, ಕರ್ನಾಟಕ ರಾಜ್ಯ ಚಿತ್ರಕಲಾ ಶಿಕ್ಷಕರ ಸಂಘ(ರಿ), ಬೆಂಗಳೂರು ರವರು ಮಾರ್ಗದರ್ಶನ ಕೋರಿರುವ ಹಾಗೂ ಈ ಸಂಬಂಧ ಸರ್ಕಾರದಲ್ಲಿ ವಿವಿಧ ಸಂಘ ಸಂಸ್ಥೆಗಳಿಂದ ಸ್ವೀಕೃತಗೊಂಡಿರುವ ಮನವಿಗಳನ್ನು ಪರಿಶೀಲಿಸಿ, ಈ ಸೌಲಭ್ಯವನ್ನು ಸರ್ಕಾರಿ/ಅನುದಾನಿತ ಪ್ರೌಢಶಾಲಾ ಚಿತ್ರಕಲಾ ಶಿಕ್ಷಕರು ಮತ್ತು ಸಂಗೀತ ಶಿಕ್ಷಕರುಗಳಿಗೂ ವಿಸ್ತರಿಸುವಂತೆ ತೀರ್ಮಾನಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ :ಇಡಿ 78 ಎಸ್‌ಎಲ್‌ಬಿ 2016,**

**ಬೆಂಗಳೂರು ದಿನಾಂಕ :02.05.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಚಿತ್ರಕಲಾ ಶಿಕ್ಷಕರು ಮತ್ತು ಸಂಗೀತ, ನೃತ್ಯ

Scanned by CamScanner

ಮತ್ತು ನಾಟಕ ಶಿಕ್ಷಕರುಗಳಿಗೂ ಕೂಡ ಒಂದು ಹೆಚ್ಚುವರಿ ವೇತನ ಬಡ್ತಿ ಸೌಲಭ್ಯವನ್ನು ಜೂನ್ 2016ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Rajyashree V.T

[ ವಿ.ಟಿ.ರಾಜ್ಯಶ್ರೀ ]
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ.[ಪ್ರೌಢಶಿಕ್ಷಣ]

ಇವರಿಗೆ :

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ವಿಕಾಸ ಸೌಧ, ಬೆಂಗಳೂರು, ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಸರಬರಾಜು ಮಾಡಲು.

ಪ್ರತಿ :

1. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ ರಾಜ್ಯ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ,
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ.
6. ನಿರ್ದೇಶಕರು(ಪ್ರೌಢಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ನಿರ್ದೇಶಕರು(ಪ್ರಾಥಮಿಕ ಶಿಕ್ಷಣ), ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
8. ಎಲ್ಲಾ ಉಪನಿರ್ದೇಶಕರುಗಳಿಗೆ/ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಆಯುಕ್ತರು/ಅಪರ ಆಯುಕ್ತರ ಮುಖೇನ)
9. ಅಧ್ಯಕ್ಷರು, ಕರ್ನಾಟಕ ರಾಜ್ಯ ಚಿತ್ರಕಲಾ ಶಿಕ್ಷಕರ ಸಂಘ(ರಿ), ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

Scanned by CamScanner